# Fire in Varthur Lake: ಈಗ ವರ್ತೂರು ಸರದಿ

ಕಳೆದ ವರ್ಷದ ಆರಂಭದಲ್ಲಿ ಬೆಳ್ಳಂದೂರು ಕೆರೆಗೆ ಎರಡು ಬಾರಿ ಬೆಂಕಿ ಹೊತ್ತಿಕೊಂಡು ಸರಕಾರದ ನಿರ್ಲಕ್ಷ್ಯವನ್ನು ಸಾಬೀತುಪಡಿಸಿತ್ತು. ಈ ವರ್ಷದ ಆರಂಭದಲ್ಲಿ ವರ್ತೂರು ಕೆರೆಗೆ ಬೆಂಕಿ ಹೊತ್ತಿಕೊಂಡು ಸುತ್ತಲಿನ ನಿವಾಸಿಗಳಲ್ಲಿ ಆತಂಕ ಸೃಷ್ಟಿಸಿದೆ.

Vijaya Karnataka | Updated:Jan 21, 2019, 11:05AM IST

ವಿಕ ಸುದ್ದಿಲೋಕ ಬೆಂಗಳೂರು ಕೆ.ಆರ್.ಪುರ/ ಬೆಂಗಳೂರು

ಕಳೆದ ವರ್ಷದ ಆರಂಭದಲ್ಲಿ ಬೆಳ್ಳಂದೂರು ಕೆರೆಗೆ ಎರಡು ಬಾರಿ ಬೆಂಕಿ ಹೊತ್ತಿಕೊಂಡು ಸರಕಾರದ ನಿರ್ಲಕ್ಷ್ಯವನ್ನು ಸಾಬೀತುಪಡಿಸಿತ್ತು. ಈ ವರ್ಷದ ಆರಂಭದಲ್ಲಿ ವರ್ತೂರು ಕೆರೆಗೆ ಬೆಂಕಿ ಹೊತ್ತಿಕೊಂಡು ಸುತ್ತಲಿನ ನಿವಾಸಿಗಳಲ್ಲಿ ಆತಂಕ ಸೃಷ್ಟಿಸಿದೆ.

ಕಳೆದ ವರ್ಷ ಜನವರಿ ಹಾಗೂ ಫೆಬ್ರವರಿಯಲ್ಲಿ ಬೆಳ್ಳಂದೂರು ಕೆರೆಯಲ್ಲಿ ಬೆಂಕಿ ಹೊತ್ತಿಕೊಂಡು ಸಮಸ್ಯೆ ಸೃಷ್ಟಿಯಾದ ಬಳಿಕ ಸರಕಾರ ಸ್ವಲ್ಪಮಟ್ಟಿಗೆ ಎಚ್ಚೆತ್ತುಕೊಂಡು ಹಲವು ಸುರಕ್ಷತಾ ಕ್ರಮಗಳನ್ನು ಕೈಗೊಂಡಿತು. ಈಗ ಬೆಳ್ಳಂದೂರು ಕೆರೆ ಪಕ್ಕದ ವರ್ತೂರು ಕೆರೆಯಲ್ಲಿ ಬೆಂಕಿ ಹೊತ್ತಿಕೊಂಡು, ಕೆರೆ ಮಧ್ಯಭಾಗದ ಸುಮಾರು 10 ಎಕರೆ ಪ್ರದೇಶ ಭಸ್ಮವಾಗಿದೆ. ಆದರೆ ಬೆಂಕಿ ಹೊತ್ತಿಕೊಳ್ಳಲು ಕಾರಣವೇನೆಂದು ತಿಳಿದು ಬಂದಿಲ್ಲ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಸೋಮವಾರ ಈ ಕುರಿತು ಪರಿಶೀಲನೆ ನಡೆಸಲಿದ್ದಾರೆ.

**ಬೆಂಕಿ ಆರಿಸಲು ಸಾಹಸ:**

ಭಾನುವಾರ ಮಧ್ಯಾಹ್ನ 2.30ರ ಸುಮಾರಿಗೆ ತೂಬರಹಳ್ಳಿ ಹಾಗೂ ಸಿದ್ದಾಪುರ ಗ್ರಾಮಗಳ ನಡುವಿನ ಕೆರೆ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಕೆರೆಯ ನಡುವೆ ದಟ್ಟ ಹೊಗೆ ಕಂಡ ಸ್ಥಳೀಯರು ಭಯಗೊಂಡು ಅಗ್ನಿಶಾಮಕ ದಳಕ್ಕೆ ಕರೆ ಮಾಡಿದರು. ಅಗ್ನಿಶಾಮಕ ದಳ ಸಿಬ್ಬಂದಿ ಬಂದು ಹಲವು ನಿಮಿಷಗಳವರೆಗೆ ನೀರು ಹಾಯಿಸಿದರೂ ಪ್ರಯೋಜನವಾಗಲಿಲ್ಲ. ಕೆರೆಯ ಮಧ್ಯಭಾಗದಲ್ಲಿ ಬೆಂಕಿ ಉರಿಯುತ್ತಿದ್ದುದರಿಂದ ಅಷ್ಟು ದೂರಕ್ಕೆ ನೀರು ಹಾಯಿಸುವುದು ಕೂಡ ಕಷ್ಟವಾಯಿತು. ನಂತರ ದೋಣಿಯ ಮೂಲಕ ತೆರಳಿದ ಸಿಬ್ಬಂದಿ ಹಲವು ಗಂಟೆಗಳವರೆಗೆ ಕಸರತ್ತು ನಡೆಸಿ ಬೆಂಕಿ ಆರಿಸಿದರು.

ಕೆರೆಯ ನಡುವೆ ಜೊಂಡು ಹುಲ್ಲು ಬೆಳೆದಿದ್ದು, ಇದೀಗ ಕೆಲವೆಡೆ ಒಣಗಿದೆ. ಇದರಿಂದ ಬೆಂಕಿ ಬೇಗನೆ ವ್ಯಾಪಿಸಿದೆ.

**ರಾಸಾಯನಿಕ ಕಾರಣವೇ?**

ಬೆಳ್ಳಂದೂರು ಕೆರೆಗೆ ಕೈಗಾರಿಕೆಯ ಕೊಳಚೆ ನೀರು ಹರಿಯುತ್ತಿದ್ದುದರಿಂದ ನೊರೆ ಉಂಟಾಗುತ್ತಿದೆ. ಈ ನೊರೆಯಲ್ಲಿ ಬೆಂಕಿ ಉರಿಯಲು ಸಹಾಯ ಮಾಡುವ ರಾಸಾಯನಿಕವಿದೆ ಎಂದು ದೃಢಪಟ್ಟಿದೆ. ಇದೇ ರೀತಿ ವರ್ತೂರು ಕೆರೆಯ ನೀರು ಕೂಡ ಕಲುಷಿತವಾಗಿರಬಹುದು ಎಂಬ ಅನುಮಾನ ವ್ಯಕ್ತವಾಗಿದೆ. ಆದರೆ ಈ ಭಾಗದಲ್ಲಿ ಕಾರ್ಖಾನೆಗಳಿಂದ ಹರಿಯುವ ಕೊಳಚೆ ನೀರನ್ನು ಸಂಪೂರ್ಣವಾಗಿ ತಡೆಗಟ್ಟಲಾಗಿದೆ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ತಿಳಿಸಿದೆ.

"ಬೆಳ್ಳಂದೂರು ಹಾಗೂ ವರ್ತೂರು ಕೆರೆಯ ಸುತ್ತಮುತ್ತಲಿನ ಹಲವಾರು ಕಾರ್ಖಾನೆಗಳಿಂದ ಕೊಳಚೆ ನೀರು ಹರಿಯುತ್ತಿತ್ತು. ಬಟ್ಟೆಗಳಿಗೆ ಬಣ್ಣ ಹಾಕುವ ಡೈಯಿಂಗ್ ಕಾರ್ಖಾನೆ ಸೇರಿದಂತೆ ಅನೇಕ ಕಾರ್ಖಾನೆಗಳನ್ನು ಮುಚ್ಚಿಸಲಾಗಿದೆ. ಈಗ ಒಂದೇ ಒಂದು ಕಾರ್ಖಾನೆಯಿಂದ ಕೆರೆಗೆ ಕೊಳಚೆ ನೀರು ಹೋಗುತ್ತಿಲ್ಲ. ಕೆಲವೆಡೆ

ಅಪಾರ್ಟ್‌ಮೆಂಟ್‌ಗಳಿಂದ ಕೊಳಚೆ ನೀರು ಹರಿಯುತ್ತಿದೆ ಎಂಬ ದೂರಿದೆ. ಆದರೆ ಈ ಕುರಿತು ಖಚಿತಪಡಿಸಿಕೊಳ್ಳಬೇಕಿದೆ. ಕೆರೆಗೆ ಬೆಂಕಿ ಬೀಳಲು ರಾಸಾಯನಿಕ ನೀರು ಕಾರಣ ಎಂದು ಕೂಡ ಹೇಳಲು ಸಾಧ್ಯವಿಲ್ಲ. ಈ ಕುರಿತು ಪರಿಶೀಲನೆ ನಡೆಸಲಾಗುವುದು,'' ಎಂದು ಮಂಡಳಿಯ ಸದಸ್ಯ ಕಾರ್ಯದರ್ಶಿ ಮನೋಜ್ ಕುಮಾರ್ ತಿಳಿಸಿದ್ದಾರೆ.

''ಬೆಳ್ಳಂದೂರು ಹಾಗೂ ವರ್ತೂರು ಕೆರೆಗೆ ಕಾರ್ಖಾನೆಗಳ ಮತ್ತು ಬಹುಮಹಡಿ ಕಟ್ಟಡಗಳ ವಿಷಮಿಶ್ರಿತ ನೀರು ಸೇರ್ಪಡೆಯಾಗುತ್ತಿದೆ. ನಾಲ್ಕೈದು ವರ್ಷಗಳಿಂದ ನೊರೆ ಹಾಗೂ ಬೆಂಕಿ ಕಾಣಿಸಿಕೊಳ್ಳುತ್ತಿದೆ. ಬೆಳ್ಳಂದೂರು ಕೆರೆ ಸಂರಕ್ಷಣೆಗೆ ಎನ್‌ಜಿಟಿ ಸೂಚನೆ ನೀಡಿದೆ. ಈಗ ಪಕ್ಕದ ವರ್ತೂರು ಕೆರೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಸರಕಾರ ಏನೂ ಕ್ರಮ ಕೈಗೊಳ್ಳದಿರುವುದರಿಂದ ಈ ಘಟನೆ ಮರುಕಳಿಸುತ್ತಿದೆ,'' ಎಂದು ಸ್ಥಳೀಯ ನಿವಾಸಿ ಜಗದೀಶ ರೆಡ್ಡಿ ದೂರಿದ್ದಾರೆ.

**ಕಸಕ್ಕೆ ಬೆಂಕಿ ?**

ವರ್ತೂರು ಕೆರೆ ಸಮೀಪ ರಾಶಿಯಾಗಿ ಬಿದ್ದಿದ್ದ ಕಸಕ್ಕೆ ಬೆಂಕಿ ಕೊಟ್ಟಿದ್ದೇ ಕೆರೆಯಲ್ಲಿ ಬೆಂಕಿ ಕಾಣಿಸಿಕೊಳ್ಳಲು ಕಾರಣ ಎಂದು ಕೆಲ ನಿವಾಸಿಗಳು ದೂರಿದ್ದಾರೆ. ಕಸದಲ್ಲಿ ಹೊತ್ತಿ ಉರಿಯುತ್ತಿದ್ದ ಬೆಂಕಿ ಕೆರೆಯ ಹುಲ್ಲಿಗೂ ವ್ಯಾಪಿಸಿದೆ ಎನ್ನಲಾಗಿದೆ.